**All India Radio: Bangalore**
**Regional Bulletin In Kannada**
**03.05.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.05.2026 / 2.30 p.m.**
**<><><><>**

ಮುಖ್ಯಾಂಶಗಳು

1. ಕೇಂದ್ರ ಕಾರ್ಮಿಕ ಸಚಿವ ಡಾ. ಮನ್ಸುಖ್ ಮಾಂಡವೀಯ ಅವರಿಂದ ದೊಡ್ಡಬಳ್ಳಾಪುರದ ೧೦೦ ಹಾಸಿಗೆ ಸಾಮರ್ಥ್ಯದ ಇಎಸ್‌ಐಸಿ ಆಸ್ಪತ್ರೆ ಸೇವೆಗೆ ಸಮರ್ಪಣೆ
2. ರೇಷ್ಮೆ ಉದ್ಯಮಕ್ಕೆ ಒತ್ತಾಸೆ ನೀಡುವ ಇ-ಸಿಲ್ಕ್ ಪೋರ್ಟಲ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಚಾಲನೆ
3. ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
4. ಐಟಿಪಿ ೩೫ ಎಟಿಪಿ ರ್‍ಯಾಕಿಂಗ್ ತುಮಕೂರು ಓಪನ್ ಮಹಿಳಾ ಚಾಂಪಿಯನ್ ಶಿಪ್ ; ಇಂದಿನಿಂದ ಟ್ರಯಲ್ಸ್ ಪ್ರಾರಂಭ

<><><><>

ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಕೇಂದ್ರ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ದೇಶದ ೧೫ ಕೋಟಿ ಜನರಿಗೆ ಇಎಸ್‌ಐಸಿ ಸಾಮಾಜಿಕ ಭದ್ರತೆ ನೀಡಲಾಗುತ್ತಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ನಿರ್ಮಾಣಗೊಂಡಿರುವ ೧೦೦ ಹಾಸಿಗೆ ಸಾಮರ್ಥ್ಯದ ಇಎಸ್‌ಐಸಿ ಆಸ್ಪತ್ರೆಯನ್ನು ಇಂದು ಉದ್ಘಾಟಿಸಿ ಅವರು ಮಾತನಾಡಿದರು. ಆರೋಗ್ಯ ಭದ್ರತೆಯು ಸಾಮಾಜಿಕ ಭದ್ರತೆಯ ಪ್ರಮುಖ ಭಾಗವಾಗಿದ್ದು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ೧೦ ವರ್ಷಗಳಲ್ಲಿ ಈ ಹಿಂದೆ ೭ ಕೋಟಿ ಇದ್ದ ಇಎಸ್‌ಐಸಿ ಸೌಲಭ್ಯವನ್ನು ಈಗ ೧೫ ಕೋಟಿ ಜನರಿಗೆ ನೀಡಿದೆ. ೪೦ ವರ್ಷ ಮೇಲ್ಪಟ್ಟ ಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರ ನಡೆಸಲಾಗುತ್ತಿದೆ ಎಂದರು.

**ಧ್ವನಿ : ಮನ್ಸುಖ್ ಮಾಂಡವೀಯ (೧೯ ಸೆಕೆಂಡ್‌ಗಳು)**

ಕೇಂದ್ರದ ೪ ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡುವ ಮೂಲಕ ಕಾರ್ಮಿಕರಿಗೆ ಸೇವಾ ಭದ್ರತೆ, ಸಮಾನ ಕೆಲಸಕ್ಕೆ ಸಮಾನ ವೇತನ ಮೊದಲಾಗಿ ಕಾರ್ಮಿಕರ ಹಿತ ಕಾಪಾಡಲಾಗುತ್ತಿದೆ ಎಂದು ಅವರು ಹೇಳಿದರು. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಇಎಸ್‌ಐಸಿ ಆಸ್ಪತ್ರೆ ಇಂದು ಕೇಂದ್ರ ಸರ್ಕಾರದ ಸಹಕಾರದಿಂದ ಉದ್ಘಾಟನೆಯಾಗಿದೆ. ಇಎಸ್‌ಐಸಿ ಆಸ್ಪತ್ರೆಯಲ್ಲಿ ಎಲ್ಲಾ ರೀತಿಯ ಚಿಕಿತ್ಸೆ ದೊರೆಯುವಂತೆ ಕ್ರಮ ವಹಿಸಲಾಗುತ್ತಿದೆ. ಆದಾಗ್ಯೂ ಹೆಚ್ಚಿನ ಚಿಕಿತ್ಸೆಗೆ ಬೇರೆ ಆಸ್ಪತ್ರೆಗೆ ಶಿಫಾರಸ್ಸು ಮಾಡಿದರೆ ಚಿಕಿತ್ಸೆ ವೆಚ್ಚವನ್ನು ಇಲಾಖೆ ಭರಿಸಲಿದೆ. ದೇಶದ ೧೭ ಇಎಸ್‌ಐಸಿ ಮೆಡಿಕಲ್ ಕಾಲೇಜುಗಳಲ್ಲಿ ಕಾರ್ಮಿಕರ ಮಕ್ಕಳಿಗೆ ೭೦೨ ಸೀಟುಗಳನ್ನು ಮೀಸಲಿರಿಸಲಾಗಿದೆ. ಕಾರ್ಮಿಕರು ಆರೋಗ್ಯದ ಬಗ್ಗೆ ಕಾಳಜಿ ವಹಸಬೇಕೆಂದು ಸಲಹೆ ನೀಡಿದರು.

**ಧ್ವನಿ : ಶೋಭಾ ಕರಂದ್ಲಾಜೆ (೨೪ ಸೆಕೆಂಡ್‌ಗಳು)**

ಇದೇ ಕಾರ್ಯಕ್ರಮದಲ್ಲಿ ಬಳ್ಳಾರಿಯ ಇಎಸ್‌ಐಸಿ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆಯನ್ನು ಸಚಿವ ಡಾ. ಮನ್ಸುಖ್ ಮಾಂಡವಿಯ ವಿಚ್ರ್ಯುಯಲ್ ಮೂಲಕ ನೆರವೇರಿಸಿದರು. ಸಂಸದ ಡಾ. ಕೆ ಸುಧಾಕರ್, ಶಾಸಕ ಧೀರಜ್ ಮುನಿರಾಜು, ಮೊದಲಾದ ಗಣ್ಯರು ಭಾಗವಹಿಸಿದ್ದರು.

<><><><>

ಬೆಂಗಳೂರಿನ ಗಾಂಧೀನಗರ ವಿಧಾನಸಭಾ ಕ್ಷೇತ್ರದ ಓಕಳಿಪುರಂದಲ್ಲಿಂದು ರೇಷ್ಮೆ ಮತ್ತು ಖನಿಜ ಭವನಕ್ಕಾಗಿ ಶಂಕುಸ್ಥಾಪನೆ ನೆರವೇರಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ಸಮ್ಮುಖದಲ್ಲಿ ಈ ಕಾರ್ಯಕ್ರಮ ನಡೆಯಿತು ಎಂದು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಸುಮಾರು ೯೯೭ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವ ಬಹು ಅಂತಸ್ತಿನ ಈ ಕಟ್ಟಡ ವಿವಿಧ ಸೇವೆಗಳನ್ನು ಒಳಗೊಂಡಿರುತ್ತದೆ. ಇದೇ ಸಂದರ್ಭದಲ್ಲಿ ಇ-ಸಿಲ್ಕ್ ಪೋರ್ಟಲ್‌ಗೂ ಚಾಲನೆ ನೀಡಲಾಗಿದೆ.

<><><><>

ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿರುವ ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣಗೊಂಡಿದೆ ಎಂದು ಜಲಸಂಪನ್ಮೂಲ ಖಾತೆಯನ್ನೂ ಹೊಂದಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಅವರು, ತುಂಗಭದ್ರಾ ಜಲಾಶಯದ

ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಪ್ರದೇಶಕ್ಕೆ ಇಂದು ಭೇಟಿ ನೀಡಿ ಕಾಮಗಾರಿ ವೀಕ್ಷಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಮುಂಗಾರು ಆರಂಭಕ್ಕೂ ಮುನ್ನವೇ ೨೨ ಹೊಸ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸುವುದಾಗಿ ತುಂಗಭದ್ರಾ ತಟದ ರೈತರಿಗೆ ಭರವಸೆ ನೀಡಲಾಗಿತ್ತು. ಅದರಂತೆ ೭೦ ವರ್ಷಗಳ ಹಳೆಯದಾದ ಎಲ್ಲಾ ಕ್ರಸ್ಟ್‌ಗೇಟ್‌ಗಳನ್ನು ಬದಲಾಯಿಸಲಾಗಿದೆ. ಸರ್ಕಾರ ಹಾಗೂ ತಜ್ಞರ ತಂಡಗಳ ಸತತ ಪ್ರಯತ್ನದಿಂದಾಗಿ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾಮಗಾರಿಯನ್ನು ಯಶಸ್ವಿಗೊಳಿಸಲಾಗಿದೆ ಎಂದು ಅವರು ಹೇಳಿದರು. ಹೊಸ ಗೇಟುಗಳ ಅಳವಡಿಕೆಯಿಂದಾಗಿ ಮುಂದಿನ ೫೦-೬೦ ವರ್ಷಗಳ ಕಾಲ ತುಂಗಭದ್ರಾ ಜಲಾಶಯವು ಭದ್ರವಾಗಿರಲಿದೆ ಎಂದು ಹೇಳಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇದರಿಂದ ವಿಜಯನಗರ, ಬಳ್ಳಾರಿ, ಕೊಪ್ಪಳ, ರಾಯಚೂರು ಜಿಲ್ಲೆಯ ರೈತರಿಗೆ ಅನುಕೂಲವಾಗಲಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೮ ಪರೀಕ್ಷಾ ಕೇಂದ್ರಗಳಲ್ಲಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ-ನೀಟ್ ಇಂದು ಸುಗಮವಾಗಿ ಆರಂಭಗೊಂಡಿದೆ. ಬೆಳಿಗ್ಗೆ ೧೧.೨೦ ಗಂಟೆಯಿಂದ ಆರಂಭಗೊಂಡಿರುವ ಪರೀಕ್ಷಾ ಪ್ರಕ್ರಿಯೆಗಳಲ್ಲಿ ಪ್ರತಿ ವಿದ್ಯಾರ್ಥಿಗಳ ಪ್ರವೇಶ ಪತ್ರ, ವಸ್ತ್ರ ಸಂಹಿತೆ, ಪರೀಕ್ಷಾ ನಿಯಮಗಳನ್ನು ಪಾಲಿಸುವ ಕುರಿತು ಪರಿಶೀಲನೆ ನಡೆಸಿ, ತಪಾಸಣೆ ಮಾಡಿ ಒಳ ಬಿಡಲಾಗುತ್ತಿತ್ತು. ಪರೀಕ್ಷೆ ನಡೆಸಲು ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿತ್ತು. ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯುತ್ ವ್ಯವಸ್ಥೆ, ಸಿ.ಸಿ ಕ್ಯಾಮೆರಾ ಅಳವಡಿಕೆ, ಆಂಬುಲೆನ್ಸ್ ಸೇವೆ, ಪರೀಕ್ಷಾ ಕೇಂದ್ರಗಳಲ್ಲಿ ಸ್ವಚ್ಛತೆ ಮತ್ತು ಪರೀಕ್ಷೆಗೆ ಹಾಜರಾಗುವ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ವೀಲ್ ಚೇರ್ ವ್ಯವಸ್ಥೆ ಆರೋಗ್ಯ ಘಟಕ ಕಲ್ಪಿಸಲಾಗಿದೆ.

<><><><>

ನಾಳೆ ನಡೆಯಲಿರುವ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ನಗರದಾದ್ಯಂತ ಹಾಗೂ ಮತ ಎಣಿಕೆ ಕೇಂದ್ರದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ಎಚ್.ಟಿ. ತಿಳಿಸಿದ್ದಾರೆ. ಮತ ಎಣಿಕೆಯ ಸಿದ್ಧತೆಗಳ ಕುರಿತು ಇಂದು

ಮಾಹಿತಿ ನೀಡಿದ ಅವರು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಈಗಾಗಲೇ ಪ್ರಾಥಮಿಕ ಸಭೆ ನಡೆಸಲಾಗಿದ್ದು, ಚುನಾವಣಾ ಕಾರ್ಯದಲ್ಲಿ ತೊಡಗಿರುವ ಎಲ್ಲಾ ಇಲಾಖೆಗಳಿಗೆ ಅಗತ್ಯ ಸೂಚನೆಗಳನ್ನು ನೀಡಲಾಗಿದೆ ಎಂದರು. ಬಂದೋಬಸ್ತ್ ಕಾರ್ಯಕ್ಕಾಗಿ ಜಿಲ್ಲಾ ಪೊಲೀಸ್ ಪಡೆಯ ಜೊತೆಗೆ ಹೆಚ್ಚುವರಿ ಸಿಬ್ಬಂದಿ ಹಾಗೂ ಕೆ.ಎಸ್.ಆರ್.ಪಿ ತುಕಡಿಗಳನ್ನು ನಿಯೋಜಿಸಲಾಗಿದೆ. ಮತ ಎಣಿಕೆ ಕೇಂದ್ರದ ಭದ್ರತೆಯ ಜೊತೆಗೆ ದಾವಣಗೆರೆ ನಗರದ ಆಯ್ದ ಸೂಕ್ಷ್ಮ ಪ್ರದೇಶಗಳಲ್ಲಿ ಹದ್ದಿನ ಕಣ್ಣಿಡಲು 'ಸ್ಟ್ರೈಕಿಂಗ್ ಫೋರ್ಸ್' ತಂಡಗಳನ್ನು ನಿಯೋಜಿಸಲಾಗಿದೆ ಎಂದು ಅವರು ವಿವರಿಸಿದರು.

**ಧ್ವನಿ: ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ಎಚ್.ಟಿ. (೨೧ ಸೆಕೆಂಡ್‌ಗಳು)**

<><><><>

ಐಟಿಪಿ ೨೫ ಎಟಿಪಿ ರ್‍ಯಾಕಿಂಗ್ ತುಮಕೂರು ಓಪನ್ ಮಹಿಳಾ ಚಾಂಪಿಯನ್ ಶಿಪ್‌ನ ಟ್ರಯಲ್ಸ್ ಇಂದಿನಿಂದ ಪ್ರಾರಂಭಗೊಂಡಿದ್ದು, ೯ ದೇಶಗಳ ಕ್ರೀಡಾಪಟುಗಳು ಭಾಗವಹಿಸಿದ್ದಾರೆ. ಕ್ರೀಡಾಕೂಟದಲ್ಲಿ ಚಾಂಪಿಯನ್ ಆದವರಿಗೆ ೧೮ ಲಕ್ಷ ರೂಪಾಯಿ ಬಹುಮಾನ ನೀಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಕ್ರೀಡೆಗೆ ಪ್ರೋತ್ಸಾಹ ನೀಡಬೇಕೆಂಬ ಉದ್ದೇಶದಿಂದ ಅನೇಕ ಕ್ರೀಡಾಕೂಟಗಳನ್ನು ಆಯೋಜನೆ ಮಾಡಲಾಗುತ್ತಿದ್ದು, ಟೆನಿಸ್ ಎಟಿಪಿ ರ್‍ಯಾಕಿಂಗ್ ೨೫ ಕ್ರೀಡಾಕೂಟ ನಾಡಿದ್ದು ಆರಂಭವಾಗಲಿದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>